# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 23-03-2021 ಪ್ರಶ್ನೆ ಸಂಖ್ಯೆ : 1683(1916)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ( ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 23-03-2021

ಉತ್ತರಿಸುವ ಸಚಿವರು: ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

ವಿಷಯ : ಅನ್ನಭಾಗ್ಯ ಯೋಜನೆಯಡಿ ನಡೆಯುತ್ತಿರುವ ಅವ್ಯವಹಾರದ ಬಗ್ಗೆ

(ಅ) ಕಾರವಾರ ಜಿಲ್ಲೆಯಲ್ಲಿ ಬಡವರ ಹಸಿವು ನೀಗಿಸಲು ಅನ್ನಭಾಗ್ಯ ಯೋಜನೆಯಡಿಯಲ್ಲಿ ಸರ್ಕಾರ ವಿತರಿಸುತ್ತಿರುವ ಅಪಾರ ಪ್ರಮಾಣದ ಅಕ್ಕಿ ಮಧ್ಯವರ್ತಿಗಳ ಪಾಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಆ) ಅನ್ನ ಭಾಗ್ಯ ಯೋಜನೆಯಡಿಯಲ್ಲಿ ಬಿ.ಪಿ.ಎಲ್, ಎ.ಪಿ.ಎಲ್ ಮತ್ತು ಅಂತ್ಯೋದಯ ಕಾರ್ಡುದಾರರಿಗೆ ವಿತರಿಸುವ ಅಕ್ಕಿಯಲ್ಲಿ ಸಾವಿರಾರು ಟನ್ ಗಟ್ಟಲೆ ಉಳಿಕೆಯಾಗುತ್ತಿದ್ದು, ಕೆಲವು ಅಧಿಕಾರಿಗಳು ಹಾಗೂ ನ್ಯಾಯಬೆಲೆ ಅಂಗಡಿ ಮಾಲೀಕರು ಸರ್ಕಾರಕ್ಕೆ ತಪ್ಪು ಲೆಕ್ಕ ತೋರಿಸಿ ಈ ಅಕ್ಕಿಯನ್ನು ಕಬಳಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಳೆದ ಐದು ವರ್ಷಗಳಿಂದ ಬಿ.ಪಿ.ಎಲ್, ಎ.ಪಿ.ಎಲ್ ಮತ್ತು ಅಂತ್ಯೋದಯ ಕಾರ್ಡುದಾರರಿಗೆ ಬಂದಿರುವ ಅಕ್ಕಿಯ ಪ್ರಮಾಣ ಹಾಗೂ ನ್ಯಾಯ ಬೆಲೆ ಅಂಗಡಿಗೆ ಅಕ್ಕಿ ಪೂರೈಸಿರುವ ಪ್ರಮಾಣ ಎಷ್ಟು; (ಜಿಲ್ಲೆಯ ವಿವಿಧ ತಾಲ್ಲೂಕುಗಳಿಗೆ ಅನ್ನ ಭಾಗ್ಯ ಯೋಜನೆಯಡಿ ಬಂದಿರುವ ಅಕ್ಕಿ ನ್ಯಾಯ ಬೆಲೆ ಅಂಗಡಿಯಿಂದ ಪೂರೈಸಿರುವ ಫಲಾನುಭವಿಗಳ ವಿವರದೊಂದಿಗೆ ಸವಿಸ್ತಾರ ವರದಿ ನೀಡುವುದು)

(ಇ) ಈ ಕ್ರಮವನ್ನು ತಪ್ಪಿಸಲು ಹಾಗೂ ಬಡವರಿಗೆ ಈ ಯೋಜನೆಯನ್ನು ಸಂಪೂರ್ಣವಾಗಿ ತಲುಪುವಂತೆ ಮಾಡಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು;

(ಈ) ಸುಳ್ಳು ಲೆಕ್ಕ ತೋರಿಸಿ ಕಾಳ ಸಂತೆಯಲ್ಲಿ ಅನ್ನ ಭಾಗ್ಯದ ಅಕ್ಕಿಯನ್ನು ಮಾರಾಟ ಮಾಡುವ ಅಧಿಕಾರಿಗಳ, ಅಂಗಡಿ ಮಾಲೀಕರ ಹಾಗೂ ಮಧ್ಯವರ್ತಿಗಳ ವಿರುದ್ಧ ಸರ್ಕಾರ ಯಾವ ರೀತಿಯ ಕ್ರಮ ಕೈಗೊಳ್ಳುವುದು? (ಸ್ಪಷ್ಟ ವಿವರ ನೀಡುವುದು)